ಕರ್ನಾಟಕ ಸರ್ಕಾರ

# ಕರ್ನಾಟಕ ರಾಜ್ಯ ಸಹಕಾರ ಚುನಾವಣಾ ಆಯೋಗ

ಸಂಖ್ಯೆ: ಸಚುಆ/ಚುನಾವಣೆ/9/2013-14

ಕರ್ನಾಟಕ ರಾಜ್ಯ ಸಹಕಾರ ವಸತಿ ಮಹಾಮಂಡಳದ ಕಟ್ಟಡ,
ನಂ.3, 2ನೇ ಮಹಡಿ, ಕರಿಯಪ್ಪ ರಸ್ತೆ,
ಬಸವನಗುಡಿ(ಕೃಷ್ಣರಾವ್ ಪಾರ್ಕ್ ಮುಂಭಾಗ)
ಬೆಂಗಳೂರು-560004 ದಿನಾಂಕ: 16.07.2013

## ಆದೇಶ

**ವಿಷಯ:-** ಸಹಕಾರ ಸಂಘಗಳ/ಸೌಹಾರ್ದ ಸಹಕಾರಿಗಳ ಆಡಳಿತ ಮಂಡಳಿಗೆ/ಪದಾಧಿಕಾರಿಗಳ ಸ್ಥಾನಗಳಿಗೆ ಚುನಾವಣೆ ನಡೆಸುವಿಕೆ – ಜಿಲ್ಲಾ ಮಟ್ಟದಲ್ಲಿ ನಿಯಂತ್ರಣ ಕೊಠಡಿ ರಚನೆ ಮಾಡುವಿಕೆ

**ಉಲ್ಲೇಖ:-**
1) ಸಹಕಾರ ಚುನಾವಣಾ ಆಯೋಗದ ಆದೇಶ ಸಂ:ಸಚುಆ/16/2013-14 ದಿನಾಂಕ:3-7-2013 ಹಾಗೂ 12-7-2013
2) ಸರ್ಕಾರದ ಅಧಿಸೂಚನೆ ಸಂ: ಸಿಒ 14 ಸಿಎಲ್ಎಂ 2013, ಬೆಂಗಳೂರು ದಿನಾಂಕ 10-7-2013

***

ರಾಜ್ಯದಲ್ಲಿನ ವಿವಿಧ ವರ್ಗಕ್ಕೆ ಸೇರಿದ ಪ್ರಾಥಮಿಕ ಸಹಕಾರ ಸಂಘಗಳ ಆಡಳಿತ ಮಂಡಳಿಗೆ/ಪದಾಧಿಕಾರಿಗಳ ಸ್ಥಾನಗಳಿಗೆ ಚುನಾವಣೆ ನಡೆಸುವ ಕುರಿತು ರಾಜ್ಯ ಸಹಕಾರ ಚುನಾವಣಾ ಆಯೋಗವು ರಿಟರ್ನಿಂಗ್ ಆಫೀಸರ್‌ಗಳನ್ನು ನೇಮಿಸುವ ಕುರಿತು ಈಗಾಗಲೇ ಕ್ರಮ ಪ್ರಾರಂಭಿಸಿದೆ. ಅಲ್ಲದೇ ಉಲ್ಲೇಖಿತ ಆದೇಶದಲ್ಲಿ ಜಿಲ್ಲಾ ಚುನಾವಣಾ ಅಧಿಕಾರಿಗಳನ್ನು ಜಿಲ್ಲಾವಾರು ನೇಮಿಸಲಾಗಿರುತ್ತದೆ. ಮೊದಲ ಹಂತದಲ್ಲಿ ಪ್ರಾಥಮಿಕ ಸಹಕಾರ ಸಂಘಗಳಿಗೆ ಸಂಬಂಧಿಸಿದಂತೆ ಮತದಾರರ ಪಟ್ಟಿಯನ್ನು ಸಿದ್ಧಪಡಿಸುವ ಕುರಿತು ಮಾರ್ಗಸೂಚಿಗಳನ್ನು ನೀಡಲಾಗಿದೆ. ರಾಜ್ಯ ಸರ್ಕಾರವು ಉಲ್ಲೇಖ (2) ರಲ್ಲಿ ಸಹಕಾರ ಸಂಘಗಳ ಕಾಯ್ದೆ 1959 ಮತ್ತು ನಿಯಮಗಳ ತಿದ್ದುಪಡಿ 2013 ಕ್ಕೆ ಅಧಿಸೂಚನೆ ಹೊರಡಿಸಿದ್ದು, ದಿನಾಂಕ:10-7-2013 ರ ರಾಜ್ಯದ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಣೆಯಾಗಿದ್ದು, ತಿದ್ದುಪಡಿ ನಿಯಮಗಳು ದಿನಾಂಕ:10-7-2013 ರಿಂದ ಜಾರಿಗೆ ಬಂದಿರುತ್ತವೆ. ಸಹಕಾರ ಸಂಘಗಳ ಚುನಾವಣೆಯನ್ನು/ಪದಾಧಿಕಾರಿಗಳ ಚುನಾವಣೆಯನ್ನು ಕಾನೂನಿನ ಅವಕಾಶಗಳಂತೆ ನಡೆಸತಕ್ಕದ್ದಾಗಿದೆ.

ಸಹಕಾರ ಸಂಘಗಳ ಚುನಾವಣೆಗಳು ಇತ್ತೀಚಿನವರೆಗೆ ಸಹಕಾರ ಸಂಘಗಳ ನಿಬಂಧಕರ ಅಧೀಕ್ಷಣೆ, ನಿಯಂತ್ರಣ ಹಾಗೂ ನಿರ್ದೇಶನದಂತೆ ನಡೆಸಲಾಗುತ್ತಿತ್ತು. ಭಾರತ ಸಂವಿಧಾನಕ್ಕೆ ಆದ 97 ನೇ ತಿದ್ದುಪಡಿಯ ಹಿನ್ನೆಲೆಯಲ್ಲಿ, ರಾಜ್ಯ ಸರ್ಕಾರವು ಸಹಕಾರ ಸಂಘಗಳ ಅಧಿನಿಯಮಗಳಿಗೆ ತಿದ್ದುಪಡಿ ತಂದಿದ್ದು, ಸಹಕಾರ ಸಂಘಗಳ ಆಡಳಿತ ಮಂಡಳಿ/ಪದಾಧಿಕಾರಿಗಳ ಚುನಾವಣೆಯನ್ನು ನಿಷ್ಪಕ್ಷಪಾತವಾಗಿ ಹಾಗೂ ಪಾರದರ್ಶಕತೆಯಿಂದ ನಡೆಸಲು ರಾಜ್ಯ ಸಹಕಾರ ಚುನಾವಣಾ ಆಯೋಗವನ್ನು ರಚನೆ ಮಾಡಿದ್ದು, ಆಯೋಗವು ಈಗಾಗಲೇ ಕಾರ್ಯ ಪ್ರಾರಂಭಿಸಿರುತ್ತದೆ.

ಸಹಕಾರ ಸಂಘಗಳ ಚುನಾವಣೆಗಳು ಸಹಕಾರ ಚುನಾವಣಾ ಆಯೋಗದ ಅಧೀಕ್ಷಣೆ, ನಿಯಂತ್ರಣ ಹಾಗೂ ಮಾರ್ಗದರ್ಶನದಂತೆ ನಡೆಸಬೇಕಾಗಿರುತ್ತದೆ. ಈ ಹಿನ್ನೆಲೆಯಲ್ಲಿ, ಸಹಕಾರ ಸಂಘಗಳಿಂದ/ಸಂಘದ ಪದಾಧಿಕಾರಿಗಳಿಂದ ಚುನಾವಣಾ ಸಿಬ್ಬಂದಿಯಾಗಿ ನೇಮಕಗೊಂಡ ಅಧಿಕಾರಿಗಳು/ನೌಕರರಿಂದ ಮತದಾರರ ಪಟ್ಟಿ ಸೇರಿದಂತೆ ಇನ್ನಿತರೆ ವಿಷಯಗಳ ಬಗ್ಗೆ ಯಾವುದೇ ಸಮಸ್ಯೆಗಳ ಕುರಿತು ಸ್ಪಷ್ಟೀಕರಣ/ಹೆಚ್ಚುವರಿ ಮಾಹಿತಿ/ಸಲಹೆಗಳು ಇತ್ಯಾದಿ ಕುರಿತು ಸಹಕಾರ ಸಂಘಗಳಿಂದ ಪ್ರಶ್ನೆಗಳು ಬರಬಹುದು, ಇಂತಹ ಪರಿಸ್ಥಿತಿಯಲ್ಲಿ ಸ್ಥಳೀಯವಾಗಿ ಎಲ್ಲಾ ರೀತಿಯ ಸಹಕಾರ ಹಾಗೂ ನೆರವು ನೀಡಲು ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಚುನಾವಣಾಧಿಕಾರಿಗಳು ಹಾಗೂ ಉಪನಿಬಂಧಕರ ಕಛೇರಿಯಲ್ಲಿ ನಿಯಂತ್ರಣ ಕೊಠಡಿ ರಚಿಸಿ, ಜಿಲ್ಲೆಯಲ್ಲಿ ಆಗಸ್ಟ್ 2013 ರ ಮಾಹೆಯಿಂದ ಪ್ರಾರಂಭಗೊಳ್ಳುವ ಸಹಕಾರ ಸಂಘಗಳ ಚುನಾವಣೆಯನ್ನು ಯಾವುದೇ ಸಮಸ್ಯೆ ಉದ್ಭವಿಸದಂತೆ ಗೊಂದಲಗಳಿಗೆ ಅವಕಾಶವಾಗದಂತೆ ಕಾನೂನಿಗೆ ಅನುಗುಣವಾಗಿ ನಡೆಸುವ ಬಗ್ಗೆ ಅಗತ್ಯ ಕ್ರಮವಿಡುವುದು. ಜಿಲ್ಲಾ ಉಪನಿಬಂಧಕರ ಕಛೇರಿಯ ಹಿರಿಯ ಅಧಿಕಾರಿ/ನೌಕರರೊಬ್ಬರನ್ನು ಈ ರೀತಿ ರಚಿಸಲಾಗುವ ನಿಯಂತ್ರಣ ಘಟಕದ ಉಸ್ತುವಾರಿಗಾಗಿ ನೇಮಿಸಲು ಜಿಲ್ಲಾ ಚುನಾವಣಾಧಿಕಾರಿಗಳಿಗೆ ಈ ಮೂಲಕ ನಿರ್ದೇಶಿಸಿದೆ. ಈ ಘಟಕದ ದೂರವಾಣಿ ಸಂಖ್ಯೆಯನ್ನು ಎಲ್ಲರಿಗೂ ತಿಳಿಸುವುದು. ನೀವು ತೆಗೆದುಕೊಂಡ ಕ್ರಮದ ಬಗ್ಗೆ ಆಯೋಗಕ್ಕೆ ವರದಿ ಸಲ್ಲಿಸುವುದು.

ಸಹಕಾರ ಚುನಾವಣಾ ಆಯೋಗ

(ಎನ್.ಸಿ. ಮುನಿಯಪ್ಪ)
**ಸಹಕಾರ ಚುನಾವಣಾ ಆಯುಕ್ತರು**

**ಇವರಿಗೆ:-**

1. ಸಹಕಾರ ಸಂಘಗಳ ಜಂಟಿ ನಿಬಂಧಕರು, ಬೆಂಗಳೂರು / ಮೈಸೂರು / ಬೆಳಗಾವಿ / ಗುಲ್ಬರ್ಗಾ ಪ್ರಾಂತ.
2. ಜಿಲ್ಲಾ ಸಹಕಾರ ಸಂಘಗಳ ಉಪನಿಬಂಧಕರು, ________________
3. ಉಪವಿಭಾಗದ ಸಹಕಾರ ಸಂಘಗಳ ಸಹಾಯಕ ನಿಬಂಧಕರು , ____________